### ಲೋಕಸಭಾ ಸಾರ್ವತ್ರಿಕ ಚುನಾವಣೆ

# ಅಂಚೆ ಮತ ಪತ್ರ ವಿತರಣೆ ಕಾರ್ಯ ವ್ಯವಸ್ಥಿತವಾಗಿರಲಿ: ವೈಶಾಲಿ ಎಂ ಎಲ್



ಗದಗ. ಮಾರ್ಚ್ : ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ, ಚುನಾವಣಾ ಪ್ರಕ್ರಿಯೆಯಲ್ಲಿ ತೊಡಗಿರುವವರಿಗೆ ಹಾಗೂ ಅಗತ್ಯ ಸೇವೆಗಳಲ್ಲಿ ತೊಡಗಿರುವ ಎಲ್ಲಾ ನೌಕರರು ಅಂಚೆ ಮತದಾನಕ್ಕೆ ಅವಕಾಶ ನೀಡಲಾಗಿದ್ದು, ಎಲ್ಲರೂ ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಬದ್ದರಾಗಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ವೈಶಾಲಿ ಎಂ.ಎಲ್ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ನಡೆದ ಅಂಚೆಮತಪತ್ರ ವಿತರಣೆ ಕುರಿತ ನೂಡಲ್ ಅಧಿಕಾರಿಗಳ ಸಭೆಯು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಒಮ್ಮೆ ಅಂಚೆ ಮತದಾನಕ್ಕೆ ಅರ್ಜಿ ಸಲ್ಲಿಸಿದಲ್ಲಿ ಮತಕೇಂದ್ರಕ್ಕೆ ಬಂದು ಮತದಾನ ಮಾಡಲು ಚುನಾವಣಾ ಅಯೋಗವು ಅವಕಾಶ ಕಲ್ಪಿಸುವುದಿಲ್ಲ. ಈ ವಿಷಯವನ್ನು ಚುನಾವಣಾ ಕಾರ್ಯನಿರತ ನೌಕರರು ಹಾಗೂ ಮತದಾರರಿಗೆ ಮನವರಿಕೆ ಮಾಡಿಕೊಡಬೇಕು ಎಂದು ಹೇಳಿದರು.

ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ನಿಗಧಿತ ದಿನಾಂಕದೊಳಗೆ ಅಂಚೆ ಮತಪತ್ರ ವಿತರಣೆ ಮತ್ತು ಒಪ್ಪಿಗೆ ಪತ್ರಗಳನ್ನು ಸಂಗ್ರಹಿಸುವಂತೆ ನೂಡಲ್ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಯಾವುದೇ ಅರ್ಹ ಮತದಾರರು ಈ ಸೌಲಭ್ಯದಿಂದ ವಂಚಿತರಾಗದಂತೆ ಎಚ್ಚರವಹಿಸುವಂತೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ 85 ವರ್ಷ ಮೀರಿದವರು, ವಿಕಲಚೇತನರು ಮತ್ತು ಕೋವಿಡ್ ಪೀಡಿತರಿಗೆ ವಿತರಿಸಲಾಗುವ ಅಂಚೆಪತ್ರ ಪತ್ರಗಳ ವಿತರಣಾ ಕಾರ್ಯವನ್ನು ಸಹ ಅತ್ಯಂತ ವ್ಯವಸ್ಥಿತವಾಗಿ ನಿರ್ವಹಿಸಬೇಕು.

ಯಾವುದೇ ಗೊಂದಲಗಳಿಗೆ ಅವಕಾಶ ಬೇಡ. ಪ್ರತಿಯೊಬ್ಬರ ಅರ್ಹರ ಮನೆಗಳಿಗೂ ಭೇಟಿ ನೀಡಿ 12 ಡಿ ಫಾರಂ ವಿತರಿಸಿ, ಒಪ್ಪಿಗೆ ಪತ್ರ ಪಡೆಯುವಂತೆ ಅಗತ್ಯ ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

85 ವರ್ಷ ಮೇಲಿನವರಿಗೆ, ಅಂಗವಿಕಲರಿಗೆ ಹಾಗೂ ಕೋವಿಡ್‌ನಿಂದ ಬಾಧಿತರಾದವರಿಗೆ ಅಂಚೆ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಆದರೆ, ಮತದಾರರು ಮತಗಟ್ಟೆಗೆ ಹೋಗಿ ಹಕ್ಕು ಚಲಾಯಿಸಿದಾಗ ಮತದಾನ ಹಬ್ಬ ಎನಿಸಿಕೊಳ್ಳುತ್ತದೆ. ಸಾಧ್ಯವಾದಷ್ಟು ಮತಕೇಂದ್ರಗಳಿಗೆ ಹೋಗಿ ಮತದಾನ ಮಾಡಲು ಜನರನ್ನು ಪ್ರೇರೇಪಿಸಬೇಕು. ಮತಕೇಂದ್ರಕ್ಕೆ ಬರಲು ಆಗದವರಿಗೆ ಅಂಚೆ ಮತಪತ್ರ ಕಡ್ಡಾಯವಾಗಿ ವಿತರಣೆ ಮಾಡಿ ಮತದಾನ ಮಾಡುವ ಕ್ರಮಗಳನ್ನು ವಿವರಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ. ಎಲ್ ಸೂಚಿಸಿದರು.ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ ಹಾಗೂ ಅಂಚೆ ಪತ್ರ ವಿತರಣೆಗೆ ನಿಯೋಜಿಸಲಾದ ವಿವಿಧ ಇಲಾಖೆಗಳ ನೋಡೆಲ್ ಅಧಿಕಾರಿಗಳು ಉಪಸ್ಥಿತರಿದ್ದರು.

# ರೋಣ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗೆ ಭೇಟಿ ಕಾಮಗಾರಿ ಪರಿಶೀಲನೆ ನಡೆಸಿದ ಸಿಇಓ



ರೋಣ : ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭರತ್ ಎಸ್ .ಅವರು ಮಗಳವಾರ ರೋಣ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು.

ಅಬ್ಬಿಗೇರಿ ಗ್ರಾಮದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನಿರ್ಮಿಸಲಾದ ಸಿಸಿ ರಸ್ತೆ ಹಾಗೂ ಚರಂಡಿ ಕಾಮಗಾರಿ ವೀಕ್ಷಣೆ ಮಾಡಿ ಪರಿಶೀಲನೆ ನಡೆಸಿದರು, ಈ ಸಂದರ್ಭದಲ್ಲಿ ಕಾಮಗಾರಿ ಕಡತಗಳನ್ನ ಹಾಗೂ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಅಳತೆ ಪರಿಶೀಲನೆ ನಡೆಸಿದರು. ಹಾಗೂ ಮುಂದಿನ ವರ್ಷಗಳಲ್ಲಿ ಕೈಗೊಳ್ಳುವ ಕಾಮಗಾರಿಗಳನ್ನು ಕೂಲಿ ಆಧಾರಿತ ಕಾಮಗಾರಿಯನ್ನು ಎಪ್ರಿಲ್ ತಿಂಗಳಲ್ಲಿ ಪ್ರಾರಂಭಿಸಲು ಸೂಚಿಸಿದರು.

ಸಸಿ ನೆಡುವ ಕಾಮಗಾರಿ ವೀಕ್ಷಣೆ: ಹಿರೇಹಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರಸ್ತೆ ಬದಿ ಸಸಿ ನೆಟ್ಟಿರುವ ಕಾಮಗಾರಿ ವೀಕ್ಷಿಸಿದ ಅವರು ಸರಿಯಾದ ರೀತಿಯಲ್ಲಿ ಸಸಿ ನೆಡುವುದು ಅವುಗಳನ್ನು ಪೊ?ಷಣೆ ಮಾಡುವದು ನಮ್ಮ ಕರ್ತವ್ಯ. ಯಾವ ಭಾಗದಲ್ಲಿ ಎಷ್ಟು ಸಸಿ ನೆಟ್ಟಿದ್ದಿರಿ, ಈ ವರ್ಷದಲ್ಲಿ ಏನೆಲ್ಲಾ ಪ್ರಗತಿ ಸಾಧಿಸಿದ್ದಿರಿ ಅದನ್ನು ಸಂಪೂರ್ಣ ಮಾಹಿತಿ ನೀಡಿ ಎಂದು ಅರಣ್ಯ ಇಲಾಖೆ ಅಧಿಕಾರಿಗಳಿಗೆ ತರಾಟೆ ತೆಗೆದುಕೊಂಡರು.

ರೋಣ ತಾಲೂಕ ಆಸ್ಪತ್ರೆಗೂ ಭೇಟಿ : ರೋಣ ತಾಲೂಕ ಆಸ್ಪತ್ರೆಗೆ ಭೇಟಿ ನೀಡಿ, ಹೊರ ರೋಗಿಗಳ ವಿಭಾಗ, ಹೆರಿಗೆ ಕೊಠಡಿ ಮತ್ತು ಪುರುಷರ ವಾರ್ಡ್, ಹಾಗೂ ಡಯಾಲಿಸಿಸ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು ಆಸ್ಪತ್ರೆಯನ್ನು ಶುಚಿಯಾಗಿ ಇಡಲು ಸೂಚನೆ ನೀಡಿದರು. ಆಸ್ಪತ್ರೆಯನ್ನು ಸರಿಯಾದ ರೀತಿಯಲ್ಲಿ ಕೆಲಸ ಮಾಡಲು ಅಲ್ಲಿನ ಸಿಬ್ಬಂದಿಗಳಿಗೆ ಎಚ್ಚರಿಕೆ ನೀಡಿದರು.

ಔಷಧ ದಾಸ್ತಾನು ಕೊಠಡಿಗೆ ಭೇಟಿ ನೀಡಿ ಅವಧಿ ಮುಗಿದಿರುವ ಔಷಧಗಳನ್ನು ನಿಗದಿತ ಸಮಯದೊಳಗೆ ವಿಲೇವಾರಿ ಮಾಡುವಂತೆ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತಿಯ ಕಾರ್ಯ ನಿರ್ವಾಹಕ ಅಧಿಕಾರಿ ರವಿ.ಎ.ಎನ್ ಸಹಾಯಕ ನಿರ್ದೇಶಕ ರಿಯಾಜ ಖತೀಬ್, ಅಬ್ಬಿಗೇರಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಲೋಹಿತ ಎಮ್, ಹಾಗು ಹಿರೇಹಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ದಳವಾಯಿ ಸೇರಿದಂತೆ, ಎಡಿಪಿಸಿ ಕಿರಣಕುಮಾರ, TC,TIEC,TA,BFT, GKM ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ದಕ್ಷ ಹಾಗೂ ಪ್ರಾಮಾಣಿಕ ಮಂಡ್ಯ ಎಸ್‌ಪಿಎನ್ ಯತೀಶ್ ಅವರಿಗೆ ಗದಗ ಸವಿತಾ ಸಮಾಜದಿಂದ ಸನ್ಮಾನ



ಮಂಡ್ಯ : ದಕ್ಷ ಹಾಗೂ ಪ್ರಾಮಾಣಿಕ ಪೋಲೀಸ್ ಅಧೀಕಾರಿಗಳು ಮತ್ತು ಮಂಡ್ಯ ಎಸ್?ಪಿ ಎನ್ ಯತೀಶ್ ಅವರು ಪೊಲೀಸ್ ಇಲಾಖೆಯಲ್ಲಿ ತನ್ನದೇ ಆದ ವೈಶಿಷ್ಟ್ಯತೆಯನ್ನು ರೂಡಿಸಿಕೊಂಡು ಬಂದಿದ್ದಾರೆ ಇವರು ಒಬ್ಬ ಸಮರ್ಥ ಪೊಲೀಸ್ ಅಧಿಕಾರಿ ಎಂದರೆ ತಪ್ಪಲಾಗಲಾರದು ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅಭೀಮಾನದಿಂದ ಮಾತನಾಡಿದರು

ಅವರು ಮೈಸೂರು ದಿಂದ ಗದಗ ಪ್ರಯಾಣ ಮಾಡುತ್ತಿದ್ದ ಸಂದರ್ಭದಲ್ಲಿ ಕೇಲಕಾಲ ಮಂಡ್ಯ ನಗರದಲ್ಲಿ ತಂಗಿದ್ದಾಗ ಸ್ಥಳಿಯ ಮಂಡ್ಯ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರು ಹಾಗೂ ಪ್ರಮುಖರನ್ನು ಜತೆಗೂಡಿಸಿಕೊಂಡು ಮಂಡ್ಯ ಎಸ್ ಪಿ.ಗಳಾದ ಎನ್ ಯತೀಶ್ ಅವರಿಗೆ ಅವರ ಕಚೇರಿಯಲ್ಲಿ ಬೇಟಿ ಮಾಡಿ ಕುಶಲೋಪರಿ ಮಾತನಾಡಿ ಗದಗ ಜಿಲ್ಲಾ ಸವಿತಾ ಸಮಾಜದಿಂದ ಗೌರವ ಸನ್ಮಾನ ಸಲ್ಲಿಸಿ ಮಂಡ್ಯ ಜಿಲ್ಲಾ ಸವಿತಾ ಸಮಾಜದ ಸಮಘ್ರ ಒಳಿತಕ್ಕೆ ಸಹಕಾರ ಕೋರಿ ಮಾತನಾಡಿ ಸರ್ಕಾರಿ ಕೆಲಸ ದೇವರ ಕೆಲಸ ಎಂದು ನಂಬಿ ಕರ್ತವ್ಯ ನಿರ್ವಹಿಸುತ್ತಿರುವ ಎನ್ ಯತೀಶ್ ಇವರ ವೃತ್ತಿಕಾರ್ಯ ಪ್ರತಿಯೊಬ್ಬ ಪೋಲೀಸರಿಗೆ ಹಿಡಿದ ಕೈಗನ್ನಡಿಯಂತಿದೆ ಎಂದರಲ್ಲದೆ

ಇಗಾಗಲೇ ಗದಗ ಜಿಲ್ಲೆಯಲ್ಲಿ ಎಸ್ಪಿಯಾಗಿ, ಅತ್ಯಂತ ಪ್ರಾಮಾಣಿಕತೆ, ದಕ್ಷತೆಯಿಂದ ಸೇವೆ ಸಲ್ಲಿಸಿ ಸ್ಥಳಿಯ ಸವಿತಾ ಸಮಾಜ ಸೇರಿದಂತೆ ಗದಗ ಜಿಲ್ಲೆಯ ಸಮಸ್ತ ಸಾರ್ವಜನಕರ ಪ್ರಶಂಸೆಗೆ ಪಾತ್ರರಾಗಿದ್ದಾರೆ ಮುಂದುವರಿದು ಸದ್ಯ ಇವರು ಮಂಡ್ಯ ಜಿಲ್ಲೆಯ ಎಸ್?ಪಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವುದು ಪನಸ್ಪೂರ್ವಕವಾಗಿ ಅಭೀನಂದನಾರ್ಹ ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ತಿಳಿಸಿದರು

ಈ ಸಂದರ್ಭದಲ್ಲಿ ಗದಗಿನ ರಾಜು ಕಢಡಿ ಮಂಡ್ಯ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಪ್ರತಾಪ. ಹಿರಿಯರಾದ ಜಯರಾಮಣ್ಣವರು ಮಂಡ್ಯ ಕಜಾಂಚಿಗಳಾದ ನಾಗರಾಜಣ್ಣವರು ಪ್ರಮುಖ ನಾಯಕರಾದ ಕೊತ್ತತ್ತಿ ಅನೀಲಕುಮಾರ ಆನಂದ. ಹಾಗೂ ಮಂಡ್ಯ ಸವಿತಾ ಸಮಾಜದ ಪ್ರಮುಖ ಮುಖಂಡರು ಹಿರಿಯರು ಯುವನಾಯಕರು ಉಪಸ್ತಿತರಿದ್ದರು

# ಅರ್ಜಿ ಆಹ್ವಾನ

ಗದಗ ಮಾರ್ಚ 20: ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ, ಮುಂಡರಗಿ, ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ ಮತ್ತು ಗಜೇಂದ್ರಗಡ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೌಲಾನಾ ಆಝಾದ ಮಾದರಿ ಶಾಲೆಗಳಿಗೆ 2024–25 ನೇ ಸಾಲಿಗೆ 6 ನೇ ತರಗತಿ ಒಟ್ಟು 360 ವಿದ್ಯಾರ್ಥಿಗಳ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಸಲಾಗಿದೆ.

ಇದರಲ್ಲಿ 75% ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಗೂ 25% ರಷ್ಟು ಇತರೇ ವರ್ಗದವರಿಗೆ ವಿತರಿಸಲಾಗುವುದು. ಅಂಗವಿಕಲ ವಿದ್ಯಾರ್ಥಿಗಳು, ವಿಶೇಷ ಗುಂಪಿಗೆ ಸೇರಿದ ಅಂದರೆ ಅನಾಥ ಮಕ್ಕಳು, ವಿಧವೆಯರ ಮಕ್ಕಳು, ಪೌರ ಕಾರ್ಮಿಕರ ಮಕ್ಕಳು ಇತ್ಯಾದಿಗಳಿಗೆ 3% ರಷ್ಟು ಆಸನಗಳನ್ನು ಕಾಯ್ದಿರಿಸಲಾಗಿದೆ.

6ನೇ ತರಗತಿಗೆ ದಾಖಲಾತಿ ಬಯಸುವ ವಿದ್ಯಾರ್ಥಿಗಳು 5 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು, ಅರ್ಜಿಗಳನ್ನು ಆನ್‌ಲೈನ್ https://dom.karnataka.gov.in ಮೂಲಕ ಎಪ್ರಿಲ್ 14 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಹಾಗೂ ಆಯಾ ತಾಲೂಕಿನ ಮೌಲಾನಾ ಆಜಾದ ಮಾದರಿ ಶಾಲೆಯ ಮುಖ್ಯೋಪಾಧ್ಯಾಯರನ್ನು ಸಂಪರ್ಕಿಸಬಹುದಾಗಿದೆ.

ಈ ಕೆಳಕಂಡ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆ.

08371–262911 ತಾಲೂಕ ಪಂಚಾಯತಿ ಆವರಣ, ಮುಂಡರಗಿ ; 08372–297494 ಮೌಲಾನಾ ಆಝಾದ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ; 08381–267258 ತಾಲೂಕ ಪಂಚಾಯತಿ ಆವರಣ, ರೋಣ. ; 08377–245411 ತಹಶೀಲ್ದಾರ ಕಾರ್ಯಾಲಯ ರೂ.ನಂ:20, ನರಗುಂದ.; 08487–242810 ತಾಲೂಕ ಪಂಚಾಯತ ಹತ್ತಿರ, ಶಿರಹಟ್ಟಿ. ಈ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ.



ಸವದತ್ತಿ : ತಾಲೂಕ ಪಂಚಾಯತ ಆವರಣದಲ್ಲಿ ಮಂಗಳವಾರ ಮಾನ್ಯ ತಾಲೂಕಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಯಶವಂತಕುಮಾರ ರವರು ಸೇಲ್ಪಿ ಪಾಯಿಂಟ್ ನಲ್ಲಿ ಫೋಟೋ ತೆಗೆದುಕೊಳ್ಳುವ ಮೂಲಕ ಮತದಾನ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದರು. ಇದೇ ವೇಳೆ ಗ್ರಾಮ ಪಂಚಾಯತಿಗಳಿಗೆ ಸೆಲ್ಪಿ ಸ್ಟ್ಯಾಂಡ್ ಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾನ್ಯ ಸಹಾಯಕ ನಿರ್ದೇಶಕರು (ಪಂ.ರಾ) ಆರ್ ಎ ಪಾಟೀಲ, ತಾಪಂ ವ್ಯವಸ್ಥಾಪಕ ಜಿ ಎಸ್ ಬಡೆಮ್ಮಿ, ತಾಪಂ ಲೆಕ್ಕಾಧಿಕಾರಿ ಉಮೇಶ ನಾವಣಿ, ತಾಪಂ ಐಇಸಿ ಸಂಯೋಜಕ ಮಲೀಕಜಾನ ಮೋಮಿನ, ತಾಪಂ ಸಿಬ್ಬಂದಿ ಬಸವರಾಜ ಹಂಕಪ್ಪನವರ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಪಂ ಸಿಬ್ಬಂದಿಗಳು, ಇನ್ನಿತರರು ಉಪಸ್ಥಿತರಿದ್ದರು.

# ಲೋಕಾಯುಕ್ತ ಸಿಪಿಐ ಹಾಲಪ್ಪ ಬಾಲದಂಡಿಗೆ ಸತ್ಕಾರ



ಮೂಡಲಗಿ: ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಕಾರ್ಯ ನಿರ್ವಹಿಸಿ ಚುನಾವಣಾ ನಿಮಿತ್ಯ ಬಾಗಲಕೋಟೆ ಜಿಲ್ಲೆಯ ತೇರದಾಳ ಪೊಲೀಸ್ ಠಾಣೆಗೆ ವರ್ಗಾವಣೆಗೊಂಡ ಪಿ ಎಸ್ ಐ ಹಾಲಪ್ಪ ವಾಯ್ ಬಾಲದಂಡಿ ಅವರು ಕರ್ನಾಟಕ ಲೋಕಾಯುಕ್ತ ಇಲಾಖೆಯಲ್ಲಿ ಸಿಪಿಐ ಹುದ್ದೆಗೆ ಮುಂಬಡ್ತಿ ಹೊಂದಿ ಬೆಂಗಳೂರು ಲೋಕಾಯುಕ್ತ ಇಲಾಖೆಗೆ ಅಧಿಕಾರ ಸ್ವೀಕರಿಸಲು ಮಂಗಳವಾರ ಸಂಜೆ ತೆರಳುತ್ತಿರುವ ಸಂದರ್ಭದಲ್ಲಿ ಹಾಲಪ್ಪ ಬಾಲದಂಡಿ ಅವರನ್ನು ಮೂಡಲಗಿಯಲ್ಲಿ ಮೂಡಲಗಿ ಪತ್ರಕರ್ತರ ಬಳಗದಿಂದ ಸತ್ಕರಿಸಿ ಗೌರವಿಸಲ್ಲಾಯಿತು.

ಈ ಸಂದರ್ಭದಲ್ಲಿ ಮೂಡಲಗಿ ಪಿಎಸ್‌ಐ ಚಂದ್ರಶೇಖರ ಹೆರಕಲ್ಲ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಕೃಷ್ಣಪ್ಪ ಗಿರೆಣ್ಣವರ, ಪ್ರಧಾನ ಕಾರ್ಯದರ್ಶಿ ಮಲ್ಲು ಬೋಳನವರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘದ ಅಧ್ಯಕ್ಷ ಭಗವಂತ ಉಪ್ಪಾರ, ಜಿಲ್ಲಾ ಕಾರ್ಯದರ್ಶಿ ಭೀಮಶಿ ತಳವಾರ, ಪತ್ರಕರ್ತರಾದ ಚಂದ್ರಶೇಖರ ಪತ್ತಾರ, ಈಶ್ವರ ಡವಳೇಶ್ವರ, ಲಕ್ಷ್ಮಣ ಮಳ್ಳಿಗೇರಿ, ಸುನಿಲ ಗಸ್ತಿ, ವಿನೋದ ಎಮ್ಮಿ ಮತ್ತು ಪ್ರಜ್ವಲ ಪುಟಾಣಿ ಇದ್ದರು

### ಲೋಕಸಭೆ ಚನಾವಣೆ–2024

# ರಾಜಕೀಯ ಸಭೆ ಸಮಾರಂಭಗಳಿಗೆ ಪೂರ್ವಾನುಮತಿ ಕಡ್ಡಾಯ: ಶಕೀಲ ಅಹಮ್ಮದ

ಬೆಳಗಾವಿ,ಮಾ. : ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರುಗಳಿದ್ದಲ್ಲಿ C-vigil App ತಂತ್ರಾಂಶವನ್ನು ಬಳಸಿಕೊಂಡು ದೂರು ದಾಖಲಿಸಬಹುದಾಗಿರುತ್ತದೆ. ರಾಜಕೀಯ ಸಭೆ ಸಮಾರಂಭಗಳಿಗೆ ಖಗಗಿಆಆಊಂ ಠಿಠಿ ತಂತ್ರಾಂಶದಲ್ಲಿ ಮಾತ್ರ ಅರ್ಜಿ ದಾಖಲಿಸಿ ಪರವಾನಿಗೆ ಪಡೆಯಬೇಕಾಗಿರುವುದರಿಂದ ಕಾರ್ಯಕ್ರಮ ನಡೆಯುವ 48 ಗಂಟೆಗಳ ಮುಂಚಿತವಾಗಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ ಎಂದು ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಹಾಗೂ ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಶಕೀಲ ಅಹಮ್ಮದ ಅವರು ತಿಳಿಸಿದರು.

ನಗರದ ತಹಶೀಲ್ದಾರ ಕಚೇರಿಯಲ್ಲಿ (ಹಳೆ ಪಾಲಿಕೆ ಕಟ್ಟಡ) ಮಂಗಳವಾರ (ಮಾ.19) ನಡೆದ ಲೋಕಸಭೆ ಚುನಾವಣೆ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

2024 ನೇ ಲೋಕಸಭಾ ಸಾರ್ವತ್ರಿಕಾ ಚುನಾವಣೆಗೆ ಸಂಬಂಧಿಸಿದಂತೆ ನವದೆಹಲಿಯ ಭಾರತ ಚುನಾವಣಾ ಆಯೋಗವು ವೇಳಾಪಟ್ಟಿಯನ್ನು ನಿಗದಿಪಡಿಸಿದಂತೆ ಬೆಳಗಾವಿ–02 ಲೋಕಸಭಾ ಕ್ಷೇತ್ರ, ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಮಾ.16 ರಿಂದ ಜೂ.6 ರವರೆಗೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ಹೇಳಿದರು.ಬೆಳಗಾವಿ–02 ಲೋಕಸಭಾ ಕ್ಷೇತ್ರ, ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳ ಕಾರ್ಯಾಲಯವನ್ನು ತಹಶೀಲ್ದಾರ ಕಚೇರಿ ಕಚೇರಿ, 1ನೇ ಮಹಡಿ, ಹಳೇ ಮಹಾನಗರ ಪಾಲಿಕೆ ಕಟ್ಟಡ, ರಿಸಲ್ದಾರ ಗಲ್ಲಿ, ಬೆಳಗಾವಿ ಇಲ್ಲಿ ಸ್ಥಾಪಿಸಲಾಗಿರುತ್ತದೆ ಎಂದು ಹೇಳಿದರು.

ಜ. 22 ರಂದು ಪ್ರಕಟಗೊಂಡ ಮತದಾರರ ಪಟ್ಟಿಯನುಸಾರ ಒಟ್ಟು 294 ಮತಗಟ್ಟೆ ಇದ್ದು. ಮತದಾರರು ಪುರುಷ: 131813, ಮಹಿಳಾ: 130766 ಹಾಗೂ ತೃತೀಯ ಲಿಂಗ: 10 ಒಟ್ಟು: 262589 ಹಾಗೂ ಪುರುಷ: 2183, ಮಹಿಳಾ: 52 ಒಟ್ಟು: 2235 ಸೇವಾ ಮತದಾರರು ಇರುತ್ತಾರೆ. ಮಾದರಿ ನೀತಿ ಸಂಹಿತೆ ಪಾಲನೆ ಕುರಿತು ಒಟ್ಟು 25 ಸೆಕ್ಟರ್ ಅಧಿಕಾರಿಗಳು, 4 ಎಫ್.ಎಸ್.ಟಿ.ತಂಡಗಳು, 02–ವ್ಹಿ.ಎಸ್.ಟಿ. ತಂಡಗಳನ್ನು ಜಿಲ್ಲಾ ಚುನಾವಣಾಧಿಕಾರಿಗಳು ನಿಯೋಜಿಸಿ ಆದೇಶಿಸಿರುತ್ತಾರೆ.

ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ 1)ಬಾಚಿ, 2)ಬೆಕ್ಕಿನಕೇರಿ ಹಾಗೂ 3)ರಾಕಸಕೊಪ್ಪ ಈ ರೀತಿ ಒಟ್ಟು 03 ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿರುತ್ತದೆ. 85+ ವರ್ಷ ಮೇಲ್ಪಟ್ಟ (ಂಗಿಖಅ) ಹಾಗೂ ವಿಕಲಚೇತನ (ಂಗಿಕಆ) ಮತದಾರರನ್ನು ಇಐಇಅಖಿಔಓಇ ತಂತ್ರಾಂಶದ ಮೂಲಕ ಗುರುತಿಸಲಾಗುತ್ತಿದ್ದು ಸದರಿ ಮತದಾರರ ಮನೆಗೆ ತೆರಳಿ ಅಂಚೆ ಮತಪತ್ರದ ಮೂಲಕ ಮತದಾನ ಪ್ರಕ್ರಿಯೆ ಜರುಗಿಸಲಾಗುವುದು ಎಂದು ಹೇಳಿದರು.

ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಮಸ್ಟರಿಂಗ್, ಡಿ–ಮಸ್ಟರಿಂಗ್ ಹಾಗೂ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿಯನ್ನು ವನಿತಾ ವಿಧ್ಯಾಲಯ ಆಂಗ್ಲ ಮಾಧ್ಯಮ ಪ್ರೌಢ ಶಾಲೆ, ಕ್ಲಬ್ ರೋಡ ಬೆಳಗಾವಿಯಲ್ಲಿ ನಡೆಸಲಾಗುವುದು.

ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರಕ್ಕೆ ಸಂಬಂಧಿಸಿಸಂತೆ ಮತಯಂತ್ರಗಳ ಭದ್ರತಾ ಕೊಠಡಿ ಹಾಗೂ ಮತಯಂತ್ರಗಳ ತಯಾರಿಕೆ ವನಿತಾ ವಿಧ್ಯಾಲಯ ಆಂಗ್ಲ ಮಾಧ್ಯಮ ಪ್ರೌಢ ಶಾಲೆ, ಕ್ಲಬ ರೋಡ ಬೆಳಗಾವಿಯಲ್ಲಿ ನಡೆಸಲಾಗುವುದು. ಯಾವುದೇ ದೂರು ಹಾಗೂ ಸಲಹೆಗಳಿದ್ದಲ್ಲಿ ದೂರವಾಣಿ ಸಂಖ್ಯೆ: 0831–2407286 ಸಂಪರ್ಕಿಸಬಹುದು ಎಂದು ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಶಕೀಲ ಅಹಮ್ಮದ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ಬೆಳಗಾವಿ ತಹಶೀಲ್ದಾರ್ ಸಿದ್ದರಾಯ ಭೋಸಗಿ ಅವರು ಹಾಜರಿದ್ದರು.

### ಗದಗ ಪಂಚಮಸಾಲಿ ಮಹಿಳಾ ಘಟಕದಿಂದ ಮಹಿಳಾ ದಿನಾಚರಣೆ–ಸನ್ಮಾನ

# ಮಹಿಳಾ ಸುರಕ್ಷತೆಯು ಅತ್ಯಗತ್ಯವಾಗಿದೆ : ನೀಲಮ್ಮ ಹುಣಶೀಕಟ್ಟಿ



ಗದಗ, ಮಾ. : ಇಂದಿನ ದಿನಮಾನಗಳಲ್ಲಿ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದರೂ ಅವಳಿಗೆ ಅಭದ್ರತೆ ಕಾಡುತ್ತಿದೆ ಮಹಿಳಾ ಸುರಕ್ಷತೆಯು ಅತ್ಯಗತ್ಯವಾಗಿದೆ ಎಂದು ಹಿರಿಯ ಜೀವಿ ನೀಲಮ್ಮ ಹುಣಶೀಕಟ್ಟಿ ಹೇಳಿದರು.

ಅವರು ಮಂಗಳವಾರ ನಗರದ ಹಾಲಕೇರಿ ಶಾಖಾ ಮಠದಲ್ಲಿ ಗದಗ ಪಂಚಮಸಾಲಿ ಸಮಾಜದ ಮಹಿಳಾ ಘಟಕ ಏರ್ಪಡಿಸಿದ್ದ ಅಂತರ್‌ರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಸಮಾಜದ ಸಾಧಕ ಮಹಿಳೆಯರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.ಮೂಲತಃ ಪಂಚಮಸಾಲಿ ಸಮುದಾಯದವರು ಒಕ್ಕಲಿಗರು, ರೈತಾಪಿ ಬದುಕನ್ನು ನಡೆಸುತ್ತ ಇಂದು ದೊಡ್ಡ ದೊಡ್ಡ ಉದ್ಯಮಿಗಳಾಗಿ, ವಿವಿದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಜೊತೆಗೆ ಶಿಕ್ಷಣಕ್ಕೂ ಹೆಚ್ಚಿನ ಒತ್ತು ನೀಡಬೇಕೆಂದರು.ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕಸ್ತೂರಿ ದಾನಪ್ಪಗೌಡ್ರ ಮಾತನಾಡಿ ಮಹಿಳೆಯರು ಮಾಡುವ ಕೆಲಸದಲ್ಲಿ ಕಾಯಕ ನಿಷ್ಠರು ಹೀಗಾಗಿ ಹಠ ಬಿಡದಂತೆ ಅವರು ಕೈಗೊಳ್ಳುವ ಎಲ್ಲ ಕೆಲಸ ಕಾರ್ಯಗಳು ಯಶಸ್ವಿಯಾಗುತ್ತಿವೆ ಎಂದರು.ಅಧ್ಯಕ್ಷತೆ ವಹಿಸಿ ಮಾತನಾಡಿದ ಜಯಶ್ರೀ ಉಗಲಾಟ ಸಮಾಜದ ಉನ್ನತಿಗಾಗಿ ನಾವೆಲ್ಲರೂ ಶ್ರಮಿಸಬೇಕಾಗಿದೆ. ಮಕ್ಕಳಿಗೆ ಶೈಕ್ಷಣಿಕವಾಗಿ ಅಭಿವೃದ್ಧಿಪಡಿಸುವ ಸಲುವಾಗಿ ಯೋ ಜನೆಯೊಂದನ್ನು ರೂಪಿಸಿ ಅದನ್ನು ಯಶಸ್ಸುಗೊಳಿಸಲಾಗುವದು ಎಂದರು.ಇದೇ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಪಾರ್ವತೆಮ್ಮ ಸಂಕಣ್ಣವರ, ನೀಲಮ್ಮ ಹುಣಶೀಕಟ್ಟಿ, ಕಸ್ತೂರಿ ದಾನಪ್ಪಗೌಡ್ರ, ಲಲಿತಾ ಪಾಟೀಲ ಹಾಗೂ ಸಾಧಕ ಮಹಿಳೆಯರಾದ ಕವಿತಾ ದಂಡಿನ, ವಿಜಯಲಕ್ಷ್ಮೀ ದಿಂಡೂರ, ನಾಗರತ್ನಾ ಮಾರನಬಸರಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಮಹಿಳೆಯರಿಗಾಗಿ ಏರ್ಪಡಿಸಿದ್ದ ವಿವಿದ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಸುಮಾ ಪಾಟೀಲ ವಚನ ನೃತ್ಯ ಹಾಗೂ ಭಾರ್ಗವಿ ಪರ್ವತಗೌಡ್ರ ಕಿತ್ತೂರ ಚೆನ್ನಮ್ಮನ ಏಕಪಾತ್ರಾಭಿನಯ, ಶಾರದಾ ಕರಮುಡಿ ಅವರ ವಚನ ಗಾಯನ ಗಮನ ಸೆಳೆಯಿತು. ವಿಜಯಶ್ರೀ ಇಳಕಲ್ಲ ಪ್ರಾರ್ಥಿಸಿದರು, ಜಯಶ್ರೀ ಪಾಟೀಲ ಸ್ವಾಗತಿಸಿದರು, ಶಿವಲೀಲಾ ಅಕ್ಕಿ ಪ್ರಾಸ್ತಾವಿಕವಾಗಿ ಮಾತನಾಡಿದರು, ಜ್ಯೋತಿ ದಾನಪ್ಪಗೌಡ್ರ, ಸುಜಾತಾ ಗುಡಿಮನಿ, ಗಂಗಾ ತಂಗೂಡಿ, ದೀಪಾ ಉಗಲಾಟ ಪರಿಚಯಿಸಿದರು, ಶಾಂತಾ ತುಪ್ಪದ ನಿರೂಪಿಸಿದರು ರೇಣುಕಾ ಅಮಾತ್ಯ ವಂದಿಸಿದರು.ಕಾರ್ಯಕ್ರಮದಲ್ಲಿ ವಿಮಲಾ ಪರ್ವತಗೌಡ್ರ, ರೇಖಾ ಕಲ್ಲನಗೌಡ್ರ, ಶಾರದಾ ಬೊಮ್ಮಸಾಗರ, ಪ್ರೇಮಾ ಕುರಡಗಿ, ಉಮಾ ಕವಳಿಕಾಯಿ, ನಿರ್ಮಲಾ ಪಾಟೀಲ, ಲಲಿತಾ ಕುರಡಗಿ, ಜ್ಯೋತಿ ಉಗಲಾಟ, ಸುಜಾತಾ ತಂಗೂಡಿ, ನಿರ್ಮಲಾ ಮಟ್ಟಿ, ಸುಧಾ ಹುಣಶೀಕಟ್ಟಿ, ಮಂಜುಳಾ ತಂಗೂಡಿ, ಸಾಗರಿಕಾ ಅಕ್ಕಿ, ಶುಭಾ ಕುಂದಗೋಳ, ಗೀತಾ ಉಗಲಾಟ ಸೇರಿದಂತೆ ಪಂಚಮಸಾಲಿ ಮಹಿಳಾ ಘಟಕದ ಪದಾಧಿಕಾರಿಗಳು, ಸದಸ್ಯರಿದ್ದರು.

## ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಯುವ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್‌ಗಳಲ್ಲಿ ಪ್ರಯಾಣಿಸಲು ಅವಕಾಶ

ಗದಗ ಮಾರ್ಚ 20: ಕರ್ನಾಟಕ ರಾಜ್ಯದ ಎಸ್.ಎಸ್.ಎಲ್.ಸಿ. ಅಂತಿಮ ಪರೀಕ್ಷೆಗಳು ಮಾರ್ಚ 25 ರಿಂದ ಪ್ರಾರಂಭವಾಗುತ್ತವೆ. ಈ ಸಂಬಂಧ ವಿದ್ಯಾರ್ಥಿಗಳಿಗೆ ಅವರ ವಿದ್ಯಾಸಂಸ್ಥೆಯ ಹೊರತಾಗಿಯೂ ಇತರೆ ವಿದ್ಯಾಸಂಸ್ಥಗಳಲ್ಲಿ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದಾಗಿ ಪದವಿ ಶಿಕ್ಷಣ ಇಲಾಖೆಯವರು ತಿಳಿಸಿರುತ್ತಾರೆ.ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕ.ರಾ.ರ.ಸಂಸ್ಥೆ ನಿಗಮವು ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಯುವ ದಿನಾಂಕಗಳಂದು ಮಾರ್ಚ 25 ರಿಂದ ಎಪ್ರಿಲ್ 6 ರವರೆಗೆ ಪರೀಕ್ಷೆಗೆ ಹಾಜರಾಗುವ ಎಲ್ಲ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ತಮ್ಮ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ಮತ್ತು ವಾಸಸ್ಥಳಕ್ಕೆ ಹಿಂದಿರುಗುವಾಗ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ ನಿಗಮದ ನಗರ ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.